ಪ್ರಜಾವಾಣಿ



ದಕ್ಷಿಣ ವಲಯ ಅಂತರ ವಿಶ್ವವಿದ್ಯಾಲಯ ಕ್ರಿಕೆಟ್ ಚಾಂಪಿಯನ್‌ಷಿಪ್‌ನಲ್ಲಿ ಪ್ರಶಸ್ತಿ ಜಯಿಸಿದ ಜೈನ್ ವಿಶ್ವವಿದ್ಯಾಲಯ ತಂಡ (ಎಡದಿಂದ, ನಿಂತವರು) ಸಿ.ಎ.ಕಾರ್ತಿಕ್, ಜೆ.ಸುಚಿತ್, ಕೆ.ವಿ.ಸಿದ್ದಾರ್ಥ್, ಎಸ್.ನಿಖಿತ್, ಆರ್.ಪ್ರಭಾಕರ್, ಕೆ.ರಿಶಬ್, ಜಿ.ಭವೇಶ್, ಬಿ.ದಿನೇಶ್, ಜಿ.ಗೌರವ್, ಜಿ.ಎಸ್.ಚಿರಂಜೀವಿ. (ಕುಳಿತವರು) ಎಸ್. ಸೂರಜ್, ನಿಧುವಾನ್ (ಕೋಚ್), ಡಾ.ಚೆನ್‌ರಾಜ್ ರಾಯ್‌ಚಂದ್ (ವಿವಿ ಅಧ್ಯಕ್ಷರು), ಡಾ.ಯು.ವಿ. ಶಂಕರ್ (ಕ್ರೀಡಾ ನಿರ್ದೇಶಕರು), ಯು.ನಿಹಾಲ್ (ನಾಯಕ). (ಮಂಡಿಯೂರಿ ಕುಳಿತವರು), ವಿ.ವಿಕ್ರಂ, ವಂಶೀಧರ್, ಮಜೀದ್, ಕೆ.ರೋಹನ್

## *ದಕ್ಷಿಣ ವಲಯ ಕ್ರಿಕೆಟ್: ಮಿಂಚಿದ ನಿಖಿತ್*

# ಜೈನ್ ವಿಶ್ವವಿದ್ಯಾಲಯಕ್ಕೆ ಪ್ರಶಸ್ತಿ

ಬೆಂಗಳೂರು: ಇಲ್ಲಿನ ಜೈನ್ ವಿಶ್ವ ವಿದ್ಯಾಲಯ ತಂಡ ಪುದುಚೇರಿಯಲ್ಲಿ ಮುಕ್ತಾಯ ಗೊಂಡ ದಕ್ಷಿಣ ವಲಯ ಅಂತರ ವಿಶ್ವವಿದ್ಯಾಲಯ ಕ್ರಿಕೆಟ್ ಚಾಂಪಿಯನ್‌ಷಿಪ್‌ನಲ್ಲಿ ಪ್ರಶಸ್ತಿ ಜಯಿಸಿದೆ.

ಇದರೊಂದಿಗೆ ತಂಡ ಸತತವಾಗಿ ಮೂರು ಬಾರಿ ಈ ಪ್ರಶಸ್ತಿಯನ್ನು ತನ್ನ ದಾಗಿಸಿಕೊಂಡ ಹೆಗ್ಗಳಿಕೆಗೆ ಪಾತ್ರವಾಗಿದೆ.

ಉತ್ತರಾಂಚಲದಲ್ಲಿ ಮುಂದಿನ ಜನವರಿಯಲ್ಲಿ ನಡೆಯಲಿರುವ ಅಖಿಲ ಭಾರತ ವಿಶ್ವ ವಿದ್ಯಾಲಯ ಕ್ರಿಕೆಟ್ ಚಾಂಪಿಯನ್‌ಷಿಪ್ ಹಾಗೂ ಟೊಯೊಟಾ ಪ್ರಾಯೋಜಿತ ಅಖಿಲ ಭಾರತ ವಿಶ್ವವಿದ್ಯಾಲಯ ಕ್ರಿಕೆಟ್ ಚಾಂಪಿಯನ್‌ಷಿಪ್‌ನಲ್ಲಿ (ಟಿಯುಸಿಸಿ) ಭಾಗವಹಿಸಲು ಅರ್ಹತೆ ಗಿಟ್ಟಿಸಿದೆ.

ಫೈನಲ್‌ನಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಚೆನ್ನೈನ ಎಸ್‌ಆರ್‌ಎಮ್ ವಿಶ್ವವಿದ್ಯಾಲಯ ತಂಡ ನಿಗದಿತ 50 ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು 159 ರನ್ ಪೇರಿಸಲಷ್ಟೇ ಶಕ್ತವಾಯಿತು.

ಸುಲಭ ಗುರಿಯನ್ನು ಬೆನ್ನಟ್ಟಿದ ಜೈನ್ ತಂಡ 49.1 ಓವರ್‌ಗಳಲ್ಲಿ ಏಳು ವಿಕೆಟ್ ಕಳೆದುಕೊಂಡು 163 ರನ್ ಗಳಿಸಿ ಸಂಭ್ರಮಿಸಿತು.

ತಂಡದ ಪರ ಎಸ್.ನಿಖಿತ್ (28 ಕ್ಕೆ 5) ಹಾಗೂ ಜೆ.ಸುಚಿತ್ (33ಕ್ಕೆ 3) ಮಾರಕ ಬೌಲಿಂಗ್ ಪ್ರದರ್ಶಿಸಿದರೆ, ಎಸ್.ಸೂರಜ್ (40) ಮತ್ತು ಕೆ.ರೋಹನ್ (37) ಬ್ಯಾಟಿಂಗ್‌ನಲ್ಲಿ ಮಿಂಚಿದರು.

ಪ್ರಸಕ್ತ ಜೈನ್ ವಿದ್ಯಾಸಂಸ್ಥೆಯಲ್ಲಿಯೇ ವಿದ್ಯಾರ್ಥಿಗಳಾಗಿರುವ ಶ್ರೇಯಸ್ ಗೋಪಾಲ್ ಮತ್ತು ಆರ್.ಸಮರ್ಥ್ ಅವರು ಮುಂಬೈ ಎದುರಿನ ರಣಜಿ ಪಂದ್ಯದಲ್ಲಿ ಆಡುತ್ತಿದ್ದಾರೆ. ಇವರಿಬ್ಬರ ಅನುಪಸ್ಥಿತಿಯಲ್ಲಿಯೂ ವಿಜಯೀ ತಂಡ ಗಮನಾರ್ಹ ಸಾಮರ್ಥ್ಯ ತೋರಿತು.

ಸಂಕ್ಷಿಪ್ತ ಸ್ಕೋರ್: ಎಸ್‌ಆರ್‌ಎಮ್ ವಿಶ್ವವಿದ್ಯಾಲಯ, 50 ಓವರ್‌ಗಳಲ್ಲಿ 159 (ಎಸ್.ನಿಖಿತ್ 28ಕ್ಕೆ 5, ಸುಚಿತ್ 33ಕ್ಕೆ 3); ಜೈನ್ ವಿಶ್ವವಿದ್ಯಾಲಯ 49.1 ಓವರ್‌ಗಳಲ್ಲಿ ಏಳು ವಿಕೆಟ್ ನಷ್ಟಕ್ಕೆ 163 (ಎಸ್.ಸೂರಜ್ 40, ಕೆ.ರೋಹನ್ 37, ಗೌರವ್ 22, ಬಿ.ದಿನೇಶ್ ಅಜೇಯ 30)

ಫಲಿತಾಂಶ: ಜೈನ್ ವಿಶ್ವವಿದ್ಯಾಲಯ ತಂಡಕ್ಕೆ 3 ವಿಕೆಟ್‌ಗಳ ಗೆಲುವು